**ಕರ್ನಾಟಕ ಸರ್ಕಾರ**

ಸಂಖ್ಯೆ: RDPR 117 GPA 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:13.10.2021.

**ಸುತ್ತೋಲೆ**

**ವಿಷಯ:** ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಶೇ.1ರಷ್ಟು ಕಟ್ಟಡ ಕಾರ್ಮಿಕ ಕಲ್ಯಾಣ ಸುಂಕವನ್ನು ಸಂಗ್ರಹಿಸಿ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಲಿ ಖಾತೆ ಸಂದಾಯ ಮಾಡುವ ಬಗ್ಗೆ.

*****

ಕಾರ್ಮಿಕ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ: ಕಾಇ 300 ಎಲ್.ಇ.ಟಿ. 2006, ದಿನಾಂಕ:18.01.2007 ಹಾಗೂ 28.02.2007 ರಲ್ಲಿ ಕಟ್ಟಡದ ನಿರ್ಮಾಣದ ವೆಚ್ಚ 10 ಲಕ್ಷ ರೂ.ಗಳನ್ನು ಮೀರಿದ ಪ್ರಕರಣಗಳಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ 1996 ರನ್ವಯ ಕಟ್ಟಡ ನಿರ್ಮಾಣ ಮಾಡುವವರಿಂದ ವಸೂಲಿ ಮಾಡಲು ಮತ್ತು ಆ ರೀತಿ ವಸೂಲಿ ಮಾಡಿದ ಮೊತ್ತವನ್ನು 30 ದಿನಗಳ ಒಳಗಾಗಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಖಾತೆಗೆ ಜಮೆ ಮಾಡಲು ತಿಳಿಸಿದೆ.

ಕಾರ್ಮಿಕ ಇಲಾಖೆಯ ಆದೇಶದನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 788 ಗ್ರಾಪಂಅ 2014, ದಿನಾಂಕ:08.05.2015 ರಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿಗಳು 2015, ದಿನಾಂಕ:08.05.2015 ರಂದು ಪ್ರಕಟಿಸಿದೆ. ಈ ಅಧಿಸೂಚನೆಯ ಕಂಡಿಕೆ 8 (i) (ಬಿ), (ii) (ಬಿ), (iii) (ಬಿ) ಮತ್ತು iv (ಬಿ) ರಲ್ಲಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿರ್ಮಾಣಗೊಳ್ಳುವ ಕಟ್ಟಡದ ಅಂದಾಜು ಮೊತ್ತ ರೂ.10 ಲಕ್ಷಗಳನ್ನು ಮೀರಿದ ಕಟ್ಟಡಗಳ ನಿರ್ಮಾಣ ವೆಚ್ಚದ ಮೇಲೆ ಶೇ.1 ರಷ್ಟು ತೆರಿಗೆಯನ್ನು ವಿಧಿಸಲು, ವಸೂಲಿ ಮಾಡಲು ಹಾಗೂ ವಸೂಲಿ ಮಾಡಿದ ಮೊತ್ತವನ್ನು 30 ದಿನದೊಳಗೆ ಕಾರ್ಮಿಕರ ಕಲ್ಯಾಣ ಮಂಡಳಿ ಖಾತೆಗೆ ಜಮೆ ಮಾಡಲು ತಿಳಿಸಲಾಗಿರುತ್ತದೆ.

ಆದಾಗ್ಯೂ ಈ ಸುಂಕವನ್ನು ಬೆಂಗಳೂರು (ನಗರ) ಹಾಗೂ ಬೆಂಗಳೂರು (ಗ್ರಾಮಾಂತರ) ಜಿಲ್ಲಾ ಪಂಚಾಯಿತಿಯ ಕೆಲವು ಗ್ರಾಮ ಪಂಚಾಯಿತಿಗಳನ್ನು ಹೊರತುಪಡಿಸಿ, ರಾಜ್ಯದ ಇನ್ನುಳಿದ ಗ್ರಾಮ ಪಂಚಾಯಿತಿಗಳು ಸಂಗ್ರಹಿಸಿರುವ ಕಾರ್ಮಿಕ ಕಲ್ಯಾಣ ನಿಧಿ ಸುಂಕವನ್ನು ಮಂಡಳಿ ಖಾತೆಗೆ ಜಮೆಯಾಗಿರುವುದಿಲ್ಲವೆಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ರವರ ಅ.ಸ. ಪತ್ರ ಸಂಖ್ಯೆ: ಕಾಇ 339 ಎಲ್.ಇ.ಟಿ. 2021, ದಿನಾಂಕ:08.09.2021 ರಲ್ಲಿ ತಿಳಿಸಿರುತ್ತಾರೆ. ಇನ್ನು ಮುಂದೆ ಈ ಸುಂಕವನ್ನು ಕಟ್ಟಡ ಕಾಮಗಾರಿಯ ನಕ್ಷೆ ಮಂಜೂರಾತಿ ಸಮಯದಲ್ಲಿ ಮತ್ತು ಮುಕ್ತಾಯದ ನಂತರ Completion Certificate ವಿತರಿಸುವ ಸಮಯದಲ್ಲಿ ವಸೂಲಿ ಮಾಡಲು ಹಾಗೂ ಈ ಮೊತ್ತವನ್ನು ಕಾರ್ಮಿಕ ಕಲ್ಯಾಣ ಮಂಡಳಿಯ ಖಾತೆಗೆ ಜಮೆ ಮಾಡಲು ಕ್ರಮ ವಹಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ತಿಳಿಸಿರುತ್ತಾರೆ. ಈ ಸುಂಕವನ್ನು ಜಮೆ ಮಾಡಬೇಕಾದ ಬ್ಯಾಂಕ ಖಾತೆ ವಿವರ ಕೆಳಗಿನಂತಿದೆ.

| | | |
|---|---|---|
| 1 | ಖಾತೆದಾರರ ಹೆಸರು ಮತ್ತು ವಿಳಾಸ | Karnataka Building & Other Construction Workers Welfare Board. 'Kalyana Suraksha Bhavan' Bannerughatt Road, Bengaluru-560029.<br><br>Ph:080-26644312/26644313/15<br><br>E-mail:Karbuildworkerswelfare@gmail.com |
| 2 | ಖಾತೆದಾರರ ಬ್ಯಾಂಕಿನ ಹೆಸರು | Canara Bank, Hombegowda Nagar Branch, 11th Cross, Wilson Garden, Bengalore-560027. |
| 3 | ಬ್ಯಾಂಕ್ ಉಳಿತಾಯ (SB) ಖಾತೆಯ ಸಂಖ್ಯೆ | 1371101079786 |
| 4 | ಬ್ಯಾಂಕ್ IFSC ಕೋಡ್ ಸಂಖ್ಯೆ | CNRB0001371 |

| | | |
|---|---|---|
| 5 | ಪಾನ್ (PAN) ಸಂಖ್ಯೆ | AAALK0820C |

ಈಗಾಗಲೇ ವಸೂಲಿ ಮಾಡಿರುವ ಸುಂಕವನ್ನು ಕಾರ್ಮಿಕ ಕಲ್ಯಾಣ ಮಂಡಳಿ ಖಾತೆಗೆ ಜಮೆ ಮಾಡಲು ಕಟ್ಟುನಿಟ್ಟಿನ ಆದೇಶ ನೀಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಈ ಮೊತ್ತವನ್ನು ವಸೂಲಿ ಮಾಡಿದ 30 ದಿನಗಳೊಳಗಾಗಿ ಸಂಬಂಧಪಟ್ಟ ಬ್ಯಾಂಕ್ ಖಾತೆಗೆ ಜಮೆ ಮಾಡದಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವಂತೆ ಸೂಚಿಸಿದೆ.

(ಚೇತನ ಎಂ.) 13/10/21
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

(30)

18/10/21